ಚುಕ್ಕೆ ಗುರುತಿಲ್ಲದ ಪ್ರಶ್ನೆ 19 : 83

ಸದಸ್ಯರ ಹೆಸರು : ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ

ಉತ್ತರಿಸುವ ಸಚಿವರು : ಶ್ರೀ ಎಸ್. ಸುರೇಶ ಕುಮಾರ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು)

ಕ್ರ. ಸಂ.	ಪ್ರಶ್ನೆ	ಉತ್ತರ
1	ಬಿದರ್ ನಗರದಲ್ಲಿ ಒಳಚರಂಡಿ ವ್ಯವಸ್ಥೆ ಸಮರ್ಪಕವಾದ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ನೈರ್ಮಲೀಕರಣದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
2	ಹಾಗಿದ್ದಲ್ಲಿ ಬೀದರ್ ನಗರಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರದ ಮುಂದಿರುವ ಕ್ರಮಗಳೇನು;	ಬೀದರ್ ನಗರಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಎ.ಡಿ.ಬಿ. (NKUSIP) ಯೋಜನೆಯಡಿ ಒಟ್ಟು ರೂ.92.70 ಕೋಟಿಗಳ ವೆಚ್ಚದಲ್ಲಿನ ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದ್ದು, ಸರ್ವೆ ಕೆಲಸ ಪ್ರಗತಿಯಲ್ಲಿದೆ. 2009ರಲ್ಲಿ ಈ ಕೆಲಸಗಳನ್ನು ಪ್ರಾರಂಭಿಸಲು ಕ್ರಮ ತೆಗೆದು ಕೊಳ್ಳಲಾಗುತ್ತಿದೆ.
3	ಬೀದರ್ ನಗರಕ್ಕೆ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಮೂಲಭೂತ ಸೌಕರ್ಯಗಳಿಗಾಗಿ ಬಿಡುಗಡೆ ಮಾಡಲಾದ ಹಣ ಮತ್ತು ಇಲ್ಲಿಯವರೆಗೆ ಖರ್ಚಾದ ಹಣವೆಷ್ಟು; (ಕಾಮಗಾರಿಗಳ ವಿವರ ನೀಡುವುದು)	ಬೀದರ್ ನಗರಕ್ಕೆ ಕಳೆದ 3 ವರ್ಷಗಳ ಅವಧಿಯಲ್ಲಿ ಮೂಲಭೂತ ಸೌಕರ್ಯಗಳಿಗಾಗಿ 12ನೇ ಹಣಕಾಸು ಯೋಜನೆಯಡಿ ರೂ.137.38 ಲಕ್ಷ ಹಾಗೂ ಎಸ್.ಎಫ್.ಸಿ. ಯೋಜನೆಯಡಿ ರೂ.1026.48 ಲಕ್ಷ ಒಟ್ಟು ರೂ.1163.86 ಲಕ್ಷ ಬಿಡುಗಡೆಯಾಗಿದ್ದು, ರೂ.238.13 ಲಕ್ಷ ಖರ್ಚು ಮಾಡಲಾಗಿರುತ್ತದೆ. (ಕಾಮಗಾರಿಗಳ ವಿವರಗಳನ್ನು ಮಾನ್ಯ ವಿಧಾನಸಭಾ ಸದಸ್ಯರಿಗೆ ಕಳುಹಿಸಲಾಗಿದೆ.)
4	ಯಾವ ಯಾವ ಕಾಮಗಾರಿಗಳು ಪ್ರಗತಿಯಲ್ಲಿವೆ; ಇದಕ್ಕೆ ವೆಚ್ಚ ಮಾಡುತ್ತಿರುವ ಹಣವೆಷ್ಟು;	12ನೇ ಹಣಕಾಸು ಯೋಜನೆಯಡಿಯಲ್ಲಿ 9 ಕಾಮಗಾರಿಗಳು ಪ್ರಗತಿಯಲ್ಲಿದ್ದು, ರೂ. 56.34 ಹಣವನ್ನು ವೆಚ್ಚ ಮಾಡಲಾಗುತ್ತಿದೆ ಹಾಗೂ ಎಸ್. ಎಫ್.ಸಿ. ಯೋಜನೆಯಡಿಯಲ್ಲಿ 25 ಕಾಮಗಾರಿಗಳು ಪ್ರಗತಿಯಲ್ಲಿದ್ದು ರೂ.830.91 ಲಕ್ಷ ಗಳನ್ನು ವೆಚ್ಚ ಮಾಡಲಾಗುತ್ತಿದೆ.